**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ.ರವರು ನಿಯಮ 72 ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಯ ಈ ಕೆಳಕಂಡ ಪ್ರಶ್ನೆಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಉತ್ತರ.**

**ಪ್ರಶ್ನೆ: ರಾಜ್ಯದಲ್ಲಿ ಅಡಿಕೆ ತೋಟಗಳಿಗೆ ಎಲೆಚುಕ್ಕಿ ರೋಗ ಕಾಣಿಸಿಕೊಂಡು, ವ್ಯಾಪಕವಾಗಿ ಹರಡಿರುವುದರಿಂದ, ದೊಡ್ಡ ಪ್ರಮಾಣದಲ್ಲಿ ಬೆಳೆ ನಷ್ಟವಾಗಿ ಅಡಿಕೆ ಬೆಳೆಗಾರರು ಅತ್ಯಂತ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಎಲೆಚುಕ್ಕಿ ರೋಗ ಗಿಡದ ಎಲ್ಲಾ ಎಲೆಗಳನ್ನು ಆವರಿಸಿಕೊಂಡು, ಕ್ರಮೇಣ ಆ ಎಲೆಗಳು ಹಳದಿ ಬಣ್ಣಕ್ಕೆ ತಿರುಗಿ, ನಂತರದ ದಿನಗಳಲ್ಲಿ ಗಿಡಗಳೇ ಸಾಯುತ್ತಿದ್ದು ಇದರಿಂದಾಗಿ ಇಡೀ ತೋಟಗಳೇ ಸಂಪೂರ್ಣವಾಗಿ ನಾಶವಾಗುತ್ತಿವೆ. ಎಲೆಚುಕ್ಕಿ ರೋಗವನ್ನು ನಿಯಂತ್ರಿಸಲು ಅಗತ್ಯ ಕ್ರಮ ವಹಿಸದೇ ಇದ್ದರೆ ಇಡೀ ಅಡಿಕೆ ಕೃಷಿಯೇ ಸಂಪೂರ್ಣವಾಗಿ ನಾಶವಾಗುವ ಸಾಧ್ಯತೆ ದಿನೇದಿನೇ ಹೆಚ್ಚಾಗುತ್ತಿದೆ.**

**ಎಲೆಚುಕ್ಕಿ ರೋಗವನ್ನು ನಿಯಂತ್ರಿಸಲು ಬೇಕಾದ ಪರಿಣಾಮಕಾರಿಯಾದ ನಿಯಂತ್ರಣ ಕ್ರಮಗಳನ್ನು ಸರ್ಕಾರ ಸಕಾಲದಲ್ಲಿ ಕೈಗೊಳ್ಳದ ಕಾರಣದಿಂದಾಗಿ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ..**

****

**ಉತ್ತರ:** ರಾಜ್ಯದಲ್ಲಿ ಅಡಿಕೆ ಬೆಳೆಯನ್ನು 7.56 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು, 11.21 ಲಕ್ಷ ಮೆ.ಟನ್ ಗಳಷ್ಟು ಉತ್ಪಾದನೆಯಿರುತ್ತದೆ. ಅಡಿಕೆ ಎಲೆಚುಕ್ಕೆ ರೋಗವು ಚಿಕ್ಕಮಗಳೂರು, ಶಿವಮೊಗ್ಗ, ಉತ್ತರ ಕನ್ನಡ, ದಕ್ಷಿಣ ಕನ್ನಡ,ಹಾಸನ, ಕೊಡಗು ಹಾಗೂ ಉಡುಪಿ ಜಿಲ್ಲೆಗಳಲ್ಲಿ ಕಂಡು ಬಂದಿರುತ್ತದೆ. ವಿವರ ಕೆಳಗಿನಂತಿದೆ:-

| ಕ್ರ. ಸಂ | ಜಿಲ್ಲೆಯ ಹೆಸರು | ಹಾನಿಗೊಳಗಾದ ಎಲೆಚುಕ್ಕೆ ರೋಗ ವಿಸ್ತೀರ್ಣ (ಹೆಕ್ಟೇರ್‌ಗಳಲ್ಲಿ) |
|---|---|---|
| 1. | ಚಿಕ್ಕಮಗಳೂರು | 25,210 |
| 2. | ಶಿವಮೊಗ್ಗ | 32,124 |
| 3. | ಉತ್ತರ ಕನ್ನಡ | 8,730 |
| 4. | ಹಾಸನ | 360 |
| 5. | ದಕ್ಷಿಣ ಕನ್ನಡ | 20,830 |
| 6. | ಉಡುಪಿ | 455 |
| 7. | ಕೊಡಗು | 850 |
| ಒಟ್ಟು | | 88,559 |

**ಅಡಿಕೆ ಎಲೆ ಚುಕ್ಕೆ ರೋಗದಿಂದ ಅಡಿಕೆ ತೋಟಗಳ ರಕ್ಷಣೆಗೆ ಕೈಗೊಂಡ ಕ್ರಮಗಳು ಈ ಕೆಳಗಿನಂತಿವೆ.**

1. 2025-26 ನೇ ಸಾಲಿನಲ್ಲಿ MIDH ಮಾರ್ಗಸೂಚಿಯನ್ವಯ ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯ “Special Interventions” ಕಾರ್ಯಕ್ರಮದಡಿ ಅಡಿಕೆ ಬೆಳೆಯಲ್ಲಿ ಎಲೆಚುಕ್ಕೆ ರೋಗದ ನಿಯಂತ್ರಣ ಕಾರ್ಯಕ್ರಮದಡಿ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಪ್ರತಿ ಹೆಕ್ಟೇರಿಗೆ ತಗಲುವ ರೂ 5000/- ಗಳಲ್ಲಿ ಶೇ.30 ರಂತೆ ಪ್ರತಿ ಹೆಕ್ಟೇರಿಗೆ ರೂ.1500/- ದರದಲ್ಲಿ 2 ಹೆಕ್ಟೇರ್ ರವರೆಗೆ ರೂ.3000/- ಗಳ ಸಹಾಯಧನ ನೀಡಲಾಗುತ್ತಿದೆ. ಈ ಬಾಬ್ತು ರೂ.860.65 ಲಕ್ಷಗಳ ಅನುದಾನ ನಿಗದಿಯಾಗಿದೆ. ಈವರೆಗೂ 14115 ರೈತರಿಗೆ ರೂ.452.61 ಲಕ್ಷಗಳ ಸಹಾಯಧನ ನೀಡಲಾಗಿರುತ್ತದೆ. ಕಾರ್ಯಕ್ರಮ ಪ್ರಗತಿಯಲ್ಲಿರುತ್ತದೆ.
2. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ ಅಡಿಕೆ ಬೆಳೆಯು

ಅಧಿಸೂಚಿತವಾಗಿದ್ದು, ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟ ಸಂಭವಿಸಿದಲ್ಲಿ ವಿಮಾ ಪರಿಹಾರವನ್ನು ಒದಗಿಸಲಾಗುತ್ತಿದೆ.

| ಕ್ರ. ಸಂ. | 2024-2025 ನೇ ಸಾಲಿನ ಬೆಳೆ ವಿಮೆ ವಿವರ | ಅಡಿಕೆ ಬೆಳೆಯುವ ಜಿಲ್ಲೆಗಳಿಗೆ |
|---|---|---|
| 1. | ಅರ್ಜಿಗಳ ಸ್ವೀಕೃತ (ಸಂಖ್ಯೆ) | 528705 |
| 2. | ವಿಸ್ತೀರ್ಣ (Covered) ಹೆಕ್ಟೇರ್ ಗಳಲ್ಲಿ | 173060.42 |
| 3. | ವಿಮಾ ಮೊತ್ತ (Sum insured) (Amount in Lakhs) | 221517.33 |
| 4. | ಪಾವತಿಸಲಾದ ವಿಮಾ ಮೊತ್ತ (Claim amount in Lakhs) | 47254.13 |
| 5. | ಫಲಾನುಭವಿಗಳ ಸಂಖ್ಯೆ | 365920 |
| 6. | 2025-2026 ನೇ ಸಾಲಿನ ಬೆಳೆ ವಿಮೆ ಅರ್ಜಿಗಳ ಸ್ವೀಕೃತ (ಸಂಖ್ಯೆ) | 652440 |

3. ಅಡಿಕೆ ಬೆಳೆಯ ಎಲೆಚುಕ್ಕೆ ರೋಗ ನಿಯಂತ್ರಣೆಯ ಬಗ್ಗೆ ಸಂಶೋಧನೆಗಾಗಿ 2023-24ನೇ ಸಾಲಿನಲ್ಲಿ ರೂ.43.61/- ಲಕ್ಷಗಳನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಶಿವಮೊಗ್ಗ ರವರಿಗೆ ಒದಗಿಸಲಾಗಿದೆ. ರೈತರ ತಾಕುಗಳಲ್ಲಿ ಹೊಸ ತಂತ್ರಜ್ಞಾನಗಳನ್ನು ಅಳವಡಿಸಿ ಸಂಶೋಧನೆಗಾಗಿ ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗಳಲ್ಲಿ 8 ಪ್ರಾತ್ಯಕ್ಷತೆಗಳನ್ನು ಕೈಗೊಳ್ಳಲಾಗಿರುತ್ತದೆ. ಈ ಅಧ್ಯಯನದಿಂದ ಸಮಗ್ರ ರೋಗ ನಿರ್ವಹಣೆಗಾಗಿ ಉತ್ತಮ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ಸಮುದಾಯ ಮಟ್ಟದಲ್ಲಿ ಶಿಲೀಂಧ್ರ ನಾಶಕಗಳ ಸಕಾಲಿಕ ಸಿಂಪರಣೆ ಮಾಡುವುದರಿಂದ, ಶಿಲೀಂಧ್ರದ ಸೋಂಕು, ರೋಗದ ಉಲ್ಬಣ ಮತ್ತು ಹರಡುವಿಕೆಯನ್ನು ಕಡಿಮೆ ಮಾಡಲು ಸಹಾಯಕವಾಗುತ್ತದೆಂದು ವರದಿ ಮಾಡಲಾಗಿರುತ್ತದೆ. ಈ ಕುರಿತು ರೈತರಿಗೆ ಅರಿವು ಮೂಡಿಸಲಾಗುತ್ತಿದೆ.

4. ಪ್ರಸಕ್ತ ಸಾಲಿನಲ್ಲಿ ಅಡಿಕೆ ಬೆಳೆಗೆ ಬಾಧಿಸುವ ಎಲೆಚುಕ್ಕೆ ರೋಗ, ಹಳದಿ ಎಲೆ ರೋಗ ಹಾಗೂ ಕೊಳೆ ರೋಗಗಳ ನಿರ್ವಹಣೆಗಾಗಿ ಫೈಟೋಸಾನಿಟರಿ (Phytosanitory) ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು), ಸಸ್ಯ ಸಂರಕ್ಷಣಾ ಕ್ರಮಗಳು ಹಾಗೂ ಪೋಷಕಾಂಶಗಳ ಸಮಗ್ರ ನಿರ್ವಹಣೆಗೆ ಸಹಾಯಧನಕ್ಕಾಗಿ ಒಟ್ಟಾರೆ ರೂ.57776.33 ಲಕ್ಷಗಳ ಪ್ರಸ್ತಾವನೆಯನ್ನು ಸಿದ್ಧಪಡಿಸಲಾಗಿದೆ. ಇದರಲ್ಲಿ MIDH ಮಾರ್ಗಸೂಚಿಯನ್ವಯ ಶೇ.30 ರಷ್ಟು ಸಹಾಯಧನದಂತೆ ಒಟ್ಟು ರೂ.17332.90 ಲಕ್ಷಗಳನ್ನು (ಕೇಂದ್ರ ಪಾಲು ರೂ.10399.74 ಲಕ್ಷಗಳು ಹಾಗೂ ರಾಜ್ಯ ಪಾಲು ರೂ.6933.14 ಲಕ್ಷಗಳು) ಕೋರಿ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.

5. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.

**ಸಂಖ್ಯೆ: HORTI 41 HGM 2026**

**(ಎಸ್. ಎಸ್. ಮಲ್ಲಿಕಾರ್ಜುನ್)**

**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**